ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ಸೂರು ಒದಗಿಸುವ ಬಗ್ಗೆ

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ):-

172 (247) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪ್ರತಿಯೊಬ್ಬರಿಗೂ "ಸೂರು" ಎಂಬ ಕಾರ್ಯಕ್ರಮವು ಸರ್ಕಾರದ ಮಟ್ಟದಲ್ಲಿ ಜರೂರಾಗಿ ನಡೆಯುತ್ತಿದೆಯೇ ;

(ಆ) ಬಡವರಿಗೆ ಸೂರು ಒದಗಿಸುವ ನಿಟ್ಟಿನಲ್ಲಿ ಸರ್ಕಾರವು ಕೈಗೊಂಡಿರುವ ಕಾರ್ಯಕ್ರಮಗಳಾವವು; ಈ ಕಾರ್ಯಕ್ರಮಗಳನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ;

(ಇ) ಇದುವರೆವಿಗೂ ರಾಜ್ಯದಲ್ಲಿ ಗುರುತಿಸಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; ಅದರಲ್ಲಿ ಎಷ್ಟು ಫಲಾನುಭವಿಗಳಿಗೆ ವಸತಿ ಹಂಚಿಕೆ ಮಾಡಲಾಗಿದೆ ;

(ಈ) ವಸತಿ ಇಲಾಖೆಯಡಿ ಹಂಚಿಕೆ ಮಾಡುವ ನಿವೇಶನಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆಯೇ ; ಹಾಗಿದ್ದಲ್ಲಿ, ನಿವೇಶನಕ್ಕಾಗಿ ಗುರುತಿಸಿರುವ ಒಟ್ಟು ಜಮೀನು ಎಷ್ಟು ? (ಜಿಲ್ಲಾವಾರು ವಿವರ ನೀಡುವುದು)